ಅರ್ಥಶಾಸ್ತ್ರ ಮತ್ತು ಸಮಾಜಶಾಸ್ತ್ರ) ವಿಭಾಗಕ್ಕೆ ಅತಿ ಹೆಚ್ಚಿನ ಸಂಖ್ಯೆಯ ಅರ್ಜಿಗಳು ಪ್ರವೇಶಾವಕಾಶ ಕೋರಿ ಸ್ವೀಕೃತವಾದ್ದರಿಂದ ಕಾಲೇಜು ಶಿಕ್ಷಣ ನಿರ್ದೇಶನಾಲಯವು ಮೈಸೂರು ವಿಶ್ವವಿದ್ಯಾನಿಲಯದ ಅನುಮತಿಯನ್ನು ಕಾಯ್ದಿರಿಸಿ ಒಂದು ಹೆಚ್ಚುವರಿ ವಿಭಾಗವನ್ನು ತೆರೆದು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ನೀಡಲಾಗಿದೆ. ಸಾರ್ವಜನಿಕ ಒತ್ತಾಯದ ಮೇಲೆ ಕಾಲೇಜಿನ ಪ್ರಾಂಶುಪಾಲರು ಪ್ರತ್ಯೇಕವಾಗಿ ಮೈಸೂರು ವಿಶ್ವವಿದ್ಯಾನಿಲಯವನ್ನು ಸದರಿ ಕಾಲೇಜಿನಲ್ಲಿ ಹೆಚ್ಚುವರಿ ವಿಭಾಗವನ್ನು ತೆರೆಯಲಾದ ಬಗ್ಗೆ ಮತ್ತು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡಲು ಅನುಮತಿ ಕೋರಿರುತ್ತಾರೆ. ವಿಶ್ವವಿದ್ಯಾನಿಲಯದ ಅನುಮತಿಯನ್ನು ಕಾಯಲಾಗಿದೆ. ಅನುಮೋದನೆ ದೊರೆತ ಕೂಡಲೇ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಕೂಡಲು ಅವಕಾಶ ಕಲ್ಪಿಸಲಾಗುವುದು.

ಉಪಾಧ್ಯಕ್ಷರು : ಈಗ 1994-95ನೇ ಸಾಲಿನ ಆಯವ್ಯಯದ ಮೇಲಿನ ಮುಂದುವರಿದ ಸಾಮಾನ್ಯ ಚರ್ಚೆ

ಪ್ರೊ. ಎಂ.ಡಿ. ನಂಜುಂಡಸ್ವಾಮಿ : ಸನ್ಮಾನ್ಯ ಉಪಾಧ್ಯಕ್ಷರೇ ನಾನು ಸಂಬಂಧಪಟ್ಟ ಯಾವುದೇ ಕಾಗದಪತ್ರಗಳನ್ನು ಇವತ್ತು ತಂದಿಲ್ಲವಾದ ಕಾರಣ ಸೋಮವಾರಕ್ಕೆ ಮಾತನಾಡಲು ಅವಕಾಶವನ್ನು ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಖಾಸಗಿ ಕಾರ್ಯಕಲಾಪಗಳು

ಖಾಸಗಿ ಸದಸ್ಯರ ವಿಧೇಯಕ :

1993ರ ಕರ್ನಾಟಕ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಪ್ರೊ ಎಂ.ಡಿ. ನಂಜುಂಡಸ್ವಾಮಿ (ಧಾರವಾಡ-ಗ್ರಾಮಾಂತರ) : ಮಾನ್ಯ ಅಧ್ಯಕ್ಷರೇ 1993ನೇ ಸಾಲಿನ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "1993ರ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಪ್ರೊ. ಎಂ.ಡಿ. ನಂಜುಂಡಸ್ವಾಮಿ : ಮಾನ್ಯ ಅಧ್ಯಕ್ಷರೇ 1993ನೇ ಸಾಲಿನ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ಮಾನ್ಯ ಉಪಾಧ್ಯಕ್ಷರೇ, ತಾವು ಹೇಗೂ ಈ ತಿದ್ದುಪಡಿಯನ್ನು ತರುತ್ತಿದ್ದೀರಿ. ಅದಕ್ಕಾಗಿ ಪ್ರೊ ನಂಜುಂಡಸ್ವಾಮಿಯವರು ಇದನ್ನು ಮಂಡಿಸತಕ್ಕಂಥ ಅವಶ್ಯಕತೆ ಇಲ್ಲವೆಂದು ನಾನು ಭಾವಿಸುತ್ತೇನೆ. ಏಕೆಂದರೆ ಸಮಗ್ರವಾದಂಥ ಒಂದು ತಿದ್ದುಪಡಿಯನ್ನು ಸರ್ಕಾರದವರೇ ತರುತ್ತಿರುವಾಗ ಇದನ್ನು ಒಂದು ಕ್ರಾಂತಿಕಾರಕವಾಗಿ ಬದಲಾವಣೆ ಮಾಡಿ ತರಬೇಕೆಂದು ಮಾನ್ಯ ಸದಸ್ಯರು ತರುವಂಥ ಅವಶ್ಯಕತೆ ಇಲ್ಲವೆಂದು ನನ್ನ ಭಾವನೆ. ನೋಟೀಸ್ ಕಳುಹಿಸಿ ಅದನ್ನು ಮಾಡಲ್ ಬೈಲಾಗಳಲ್ಲಿ ಮತ್ತು ಪ್ಲಾನಿಂಗ್ ಕಮೀಷನರ್‌ರವರ ಒಂದು ಹೇಳಿಕೆಯ ಆಧಾರದ ಮೇಲೆ ಕೆಲವು ತಿದ್ದುಪಡಿಗಳನ್ನು ಮಾಡಿ ಅವುಗಳನ್ನು ಕೂಡ ಸಭೆಯ ಮುಂದೆ ತಂದಿದ್ದಾರೆ.